ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ **130/2023**

ಪಿ.ಡಬ್ಲ್ಯೂ-**07**
ಸಿ.ಡಬ್ಲ್ಯೂ-**07**

ಸಾಕ್ಷಿಗೆ ದಿನಾಂಕ **27.03.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು ಃ ರಂಗಸ್ವಾಮಿ ಬಿ ಟಿ

ತಂದೆಯ ಹೆಸರು ಃ ಬಿ ಆರ್ ತಿಮ್ಮಪ್ಪ

ವಯಸ್ಸು ಃ 47 ವರ್ಷ

ಉದ್ಯೋಗ ಃ ಪೋಲೀಸ್ ಮುಖ್ಯಪೇದೆ, ಹೊಸದುರ್ಗ ಠಾಣೆ

ವಾಸಸ್ಥಳ ಃ ಹೊಸದುರ್ಗ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ನಾನು ಏಪ್ರಿಲ್ 2021 ರಿಂದ ಇಲ್ಲಿಯವರೆಗೆ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ.

ದಿನಾಂಕ 01.09.2022 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಬೆಳಿಗ್ಗೆ 9.30 ಗಂಟೆ ಸಮಯದಲ್ಲಿ ಹೊಸದುರ್ಗ ಸರ್ಕಾರಿ ಆಸ್ಪತ್ರೆಯಿಂದ ಬಂದ ಮೆಮೋ ಸ್ವೀಕರಿಸಿ ಆಸ್ಪತ್ರೆಗೆ ಬೇಟಿ ನೀಡಿ ಗಾಯಾಳು ಆದ ಚಾಸಾ -1 ರವರ ಹೇಳಿಕೆಯನ್ನು ಪಡೆದು 10.00 ಗಂಟೆಗೆ ಠಾಣೆಗೆ ವಾಪಸ್ ಬಂದು ಠಾಣಾ ಮೊಕದ್ದಮೆ ಸಂಖ್ಯೆ 369/2022 ರಂತೆ ಐ ಪಿ ಸಿ ಕಲಂ 341, 323, 324, 504, 506 ರಂತೆ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಪ್ರತಿಗಳನ್ನು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿಃ 02.09.2022 ರಂದು ಕೃತ್ಯ ಸ್ಥಳಕ್ಕೆ ಬೇಟಿ ನೀಡಿ ಪಂಚರಾದ ಚಾಸಾ -2 ಮತ್ತು 3 ಹಾಗೂ ಸಾಕ್ಷಿದಾರರಾದ ಚಾಸಾ -1 ರವರ ಸಮಕ್ಷಮ .ಚಾಸಾ 1 ರವರು ಸ್ಥಳ ತೋರಿಸಿದಂತೆ ಪಂಚನಾಮೆ ಕ್ರಮವನ್ನು ಬೆಳಗ್ಗೆ 10.00 ರಿಂದ 10.30 ಗಂಟೆ ವರೆಗೆ ಜರುಗಿಸಿರುತ್ತೇನೆ. ಆ ಸಮಯದಲ್ಲಿ ಚಾಸಾ 1 ರವರು ಹಾಜರು ಪಡಿಸಿದ ಒಂದು ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ . ಸ್ಥಳದಲ್ಲಿ ಕಚ್ಚಾ ನಕಾಶೆ ತಯಾರು ಮಾಡಿರುತ್ತೇನೆ. ವಶಪಡಿಸಿಕೊಂಡ ಕಲ್ಲನ್ನು ಮಾಲುಪಟ್ಟಿ ಸಂಖ್ಯೆ 189/2022 ರಂತೆ ಅಳವಡಿಸಿಕೊಂಡಿರುತ್ತೇನೆ . ಅದೇ ದಿನದಂದು ಸಾಕ್ಷಿದಾರರಾದ ಚಾಸಾ-4 ಮತ್ತು 5 ರವರ

ಹೇಳಿಕೆಗಳನ್ನು ಪ್ರತ್ಯೇಕವಾಗಿ ದಾಖಲಿಸಿಕೊಂಡಿರುತ್ತೇನೆ .ನಂತರ ಚಾಸಾ 6 ವೈದ್ಯರಿಂದ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ನಂತರ ತನಿಖೆ ಪೂರೈಸಿ ಆರೋಪಿಗಳ ವಿರುದ್ಧ ಅಂತಿಮ ದೋಷರೋಪಣಾ ಪಟ್ಟಿಯನ್ನು ಘನ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಸಾಕ್ಷಿಯು ದೂರನ್ನು ಮತ್ತು ಅದರಲ್ಲಿನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-07 ಎಂದು ಗುರುತಿಸಲಾಯಿತು, ಸಾಕ್ಷಿಯ ಸಹಿಯನ್ನು ನಿಪಿ-07(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಮಾಲುಪಟ್ಟಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-8 ಎಂದು ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾನಕಾಶೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-3(ಡಿ) ಎಂದು ಗುರುತಿಸಲಾಯಿತು. ಸಾಕ್ಷಿ ಚಾಸಾ-5 ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-9 ಎಂದು ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಪಂಚರಿಗೆ ಜಾರಿ ಮಾಡಿದ ನೊಟೀಸನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು. ಸಾಕ್ಷಿ ಚಾಸಾ-4 ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.ಸಾಕ್ಷಿ ಚಾಸಾ-1 ರವರ ಗಾಯದ ಪ್ರಮಾಣ ಪತ್ರ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-6 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ಅಮಾನತ್ತುಪಡಿಸಿಕೊಂಡ ಕಲ್ಲನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ಮುದ್ದೆ ಮಾಲು-1 ಎಂದು ಗುರುತಿಸಲಾಗಿದೆ.

ಪಾಟೀ ಸವಾಲು ಆರೋಪಿ ಪರ ಶ್ರೀ ಐ ಜೆ ವಕೀಲರಿಂದ

ಚಾಸಾ-1 ರವರ ಹೇಳಿಕೆ ದೂರನ್ನು ನಾನೇ ಬರೆದಿರುತ್ತೇನೆ. ಚಾಸಾ-1 ರವರು ಯಾವುದೇ ಹೇಳಿಕೆ ನೀಡದಿದ್ದರೂ ನಾನೇ ಬರೆದಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ

ಎಂದರೆ ಸರಿಯಲ್ಲ. ದಿಃ 02.09.2022 ರಂದು ಕೃತ್ಯ ಸ್ಥಳಕ್ಕೆ ಬೇಟಿ ನೀಡಿದಾಗ ಪಂಚರಿಗೆ ಸ್ಥಳದಲ್ಲಿ ನೋಟೀಸ್ ನೀಡಿರುತ್ತೇನೆ . ಪಂಚರಿಗೆ ಸ್ಥಳದಲ್ಲಿ ಯಾವುದೇ ನೋಟೀಸ್ ನೀಡದೇ ಅದನ್ನು ಠಾಣೆಯಲ್ಲಿ ಸೃಷ್ಟಿ ಮಾಡಿರುತ್ತೇನೆ ಎಂದರೆ ಸುಳ್ಳು . ಮುದ್ದೆ ಮಾಲು 1 ರ ಕಲ್ಲನ್ನು ಚಾಸಾ -1 ರವರು ಹಾಜರುಪಡಿಸಿರುತ್ತಾರೆ. ಚಾಸಾ-4 ಮತ್ತು 5 ರವರ ಹೇಳಿಕೆಗಳನ್ನು ಕೃತ್ಯ ಸ್ಥಳದಲ್ಲಿ ಪಡೆದುಕೊಂಡಿರುತ್ತೇನೆ . ಸದರಿ ದಾಖಲೆಗಳನ್ನು ಚಾಸಾ-1 ರವರ ಮಾತನ್ನು ಕೇಳಿಕೊಂಡು ಪೋಲೀಸ್ ಠಾಣೆಯಲ್ಲಿ ಸೃಷ್ಟಿ ಮಾಡಿರುತ್ತೇವೆ ಎಂದರೆ ಸುಳ್ಳು. ಚಾಸಾ-4 ಮತ್ತು 5 ರವರ ಹೇಳಿಕೆಗಳನ್ನು ಸ್ಥಳದಲ್ಲಿ ಲ್ಯಾಪ್ ಟಾಪ್‌ನಲ್ಲಿ ಟೈಪ್ ಮಾಡಿರುತ್ತೇವೆ . ಮಹಜರ್ ನಲ್ಲಿ ಅಥವಾ ಹೇಳಿಕೆಗಳಲ್ಲಿ ಸ್ಥಳದಲ್ಲಿ ಲ್ಯಾಪ್ ಟಾಪ್‌ನಲ್ಲಿ ಹೇಳಿಕೆಗಳನ್ನು ದಾಖಲಿಸಿದ್ದು ಬರೆದಿರುವುದಿಲ್ಲ. ಆರೋಪಿಗಳ ವಿರುದ್ದದ ದ್ವೇಷದಿಂದ ಚಾಸಾ-1 ರವರು ನೀಡಿದ ಸುಳ್ಳು ಹೇಳಿಕೆಯ ಆದಾರದ ಮೇರೆಗೆ ಅವರ ಜೊತೆ ಶಾಮಿಲಾಗಿ ನಾನು ಎಲ್ಲಾ ದಾಖಲೆಗಳನ್ನು ಠಾಣೆಯಲ್ಲಿ ಸೃಷ್ಟಿಸಿ ಈಗ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ . ಸದರಿ ಮುದ್ದೆ ಮಾಲು -1 ರ ಕಲ್ಲನ್ನು ಸ್ಥಳದಲ್ಲಿ ಅಮಾನತ್ತುಪಡಿಸಿಕೊಂಡೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ . ಮಹಜರ್ ಕಾಲದಲ್ಲಿ ಪೋಟೋಗಳನ್ನು ತೆಗೆಯಲು ತೊಂದರೆ ಇರಲಿಲ್ಲ. ಆರೋಪಿಗಳು ಯಾವುದೇ ಕೃತ್ಯ ಮಾಡದೇ ಇದ್ದರೂ ಚಾಸಾ 1 ರವರ ಮಾತನ್ನು ಕೇಳಿಕೊಂಡು ದಾಖಲೆಗಳನ್ನು ಸೃಷ್ಟಿಸಿ ಆರೋಪಿಗಳ ವಿರುದ್ದ ಸುಳ್ಳು ದೋಷರೋಪಣಾ ಪತ್ರ ಸಲ್ಲಿಸಿರುತೇನೆ ಎಂದರೆ ಸರಿಯಲ್ಲ . ಆರೋಪಿಗಳಿಗೂ ಮುದ್ದೆ ಮಾಲಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ . ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ.ಹೇ.ಕೆ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.